# ಕರ್ನಾಟಕ ಸರಕಾರ

ಮಾಹಿತಿ ಹಕ್ಕು ಅಧಿ ನಿಯಮ 2005 ಅಧ್ಯಾಯ 2 ನಿಯಮ 4(1) ಬಿ ಪ್ರಕಾರ

ಪ್ರಕಟಿಸಿದ ಮಾಹಿತಿ

**31-12-2017 ರವರೆಗೆ**

ಸಾರ್ವಜನಿಕ ಮಾಹಿತಿ ಅಧಿಕಾರಿ,

ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ,

ಹೊನ್ನಾವರ

**4(1)ಬಿ(i)ಅದರ ರಚನೆ,ಕಾಯಗಳು ಮತ್ತು ಕರ್ತವ್ಯಗಳ ವಿವರಗಳು:**

ಸಂಘಟನೆ: ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿರವರು ಈ ಕಛೇರಿಯ ಮುಖ್ಯಸ್ಥರಾಗಿರುತ್ತಾರೆ ಮತ್ತು ಈ ಕೆಳಕಂಡ ಅಧಿಕಾರಿಗಳು ಇವರ ಅಧೀನದಲ್ಲಿ ಕಾರ್ಯ ನಿರ್ವಹಿಸಿರುತ್ತಾರೆ.

| | |
|---|---|
| ಅ) ಹಿರಿಯ ಮೋಟಾರು ವಾಹನ ನಿರೀಕ್ಷಕರು | - 01 |
| ಆ) ಮೋಟಾರು ವಾಹನ ನಿರೀಕ್ಷಕರು | - 01 |
| ಇ) ಅಧೀಕ್ಷಕರು | - 01 |
| ಈ) ಬೆರಳಚ್ಚುಗಾರರು | - 01 |
| ಉ) ಪ್ರಥಮ ದರ್ಜೆ ಸಹಾಯಕರು | - 02 |
| ಊ)ದ್ವಿತೀಯ ದರ್ಜೆಸಹಾಯಕರು | - 04 |
| ಋ) ವಾಹನ ಚಾಲಕರು | - 01 |
| ಋ) ಜವಾನರು | - 02 |

ಈ ಕಛೇರಿಯಲ್ಲಿ ಮುಖ್ಯವಾಗಿ ಸಾರಿಗೆ ಮತ್ತು ಸಾರಿಗೇತರ ವಾಹನಗಳ ನೋಂದಣಿ ತೆರಿಗೆ ವಸೂಲಾತಿ ಕಲಿಕಾ ಚಾಲನಾ ಅನುಜ್ಞಾ ಪತ್ರ ಮತ್ತು ವಾಹನಗಳ ಉಪಯೋಗದ ನಿಯಂತ್ರಣ ಬಗ್ಗೆ ಈ ಕೆಳಕಂಡ ಕಾಯ್ದೆ ನಿಯಮದ ಅಡಿಯಲ್ಲಿ ಕಾರ್ಯ ನಿರ್ವಹಿಸಲಾಗುತ್ತದೆ.

1) ಕೇಂದ್ರ ಮೋಟಾರು ವಾಹನ ಕಾಯ್ದೆ, 1988
2) ಕೇಂದ್ರ ಮೋಟಾರು ವಾಹನ ಕಾಯ್ದೆ ನಿಯಮಗಳು,1989
3) ಕರ್ನಾಟಕ ಮೋಟಾರು ವಾಹನ ಕಾಯ್ದೆ ನಿಯಮಗಳು,1989
4) ಕರ್ನಾಟಕ ಮೋಟಾರು ವಾಹನ ತೆರಿಗೆ ಕಾಯ್ದೆ ಮತ್ತು ನಿಯಮಗಳು,1957ಮತ್ತು ಸಂಬಂಧಿಸಿದ ತಿದ್ದುಪಡಿಗಳು.

ಪ್ರಮುಖ ಕಾರ್ಯಗಳು

1) ವಾಹನಗಳ ನೋಂದಣಿ
2) ಚಾಲನಾ ಹಾಗೂ ನಿರ್ವಾಹಕ ಅನುಜ್ಞಾ ಪತ್ರಗಳನ್ನು ನೀಡುವಿಕೆ.
3) ಸರಕು ಸಾಗಣೆ ಹಾಗೂ ಪ್ರಯಾಣಿಕ ವಾಹನಗಳಿಗೆ ರಹದಾರಿಗಳನ್ನು ನೀಡುವಿಕೆ
4) ಮೋಟಾರು ವಾಹನಗಳ ತೆರಿಗೆ ಸಂಗ್ರಹಣೆ.
5) ಅಪಘಾತಕ್ಕೀಡಾದ ವಾಹನಗಳನ್ನು ಪರೀಕ್ಷಿಸಿ ಅದರ ಬಗ್ಗೆ ಅಭಿಪ್ರಾಯ ನೀಡುವದು.
6) ರಸ್ತೆ ಸುರಕ್ಷತಾ ಕಾರ್ಯಕ್ರಮಗಳು
7) ವಾಹನಗಳಿಂದಾಗುವ ವಾಯು ಮಾಲಿನ್ಯ ನಿಯಂತ್ರಣದ ಬಗ್ಗೆ ಪ್ರವರ್ತನೆ.
8) ಪ್ರವರ್ತನ ಕಾರ್ಯ ಹಾಗೂ ದಂಡ ವಿಧಿಸುವದು.

**4(1)ಬಿ(ii)ಅದರ ಅಧಿಕಾರಿಗಳು ಮತ್ತು ನೌಕರರ ಅಧಿಕಾರಗಳು ಮತ್ತು ಕರ್ತವ್ಯಗಳು :**

**1) ಕಛೇರಿ ವಿಳಾಸ :**

ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಹಾಗೂ ಹೆಚ್ಚುವರಿ ಕಾರ್ಯದರ್ಶಿ, ಪ್ರಾದೇಶಿಕ ಸಾರಿಗೆ ಪ್ರಾಧೀಕಾರ ಮತ್ತು ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಕಛೇರಿ ಎ.ಪಿ.ಎಮ್.ಸಿ ಕಟ್ಟಡ ರಾಮತೀರ್ಥ ರಸ್ತೆ, ಹೊನ್ನಾವರ-581334 ಇದ್ದು ಈ ಕಛೇರಿಯ ವ್ಯಾಪ್ತಿಯಲ್ಲಿ ಕುಮಟಾ, ಹೊನ್ನಾವರ ಹಾಗೂ ಭಟ್ಕಳ ತಾಲೂಕುಗಳು ಸೇರಿರುತ್ತವೆ. ಪ್ರತಿ ತಿಂಗಳು ಸಾರ್ವಜನಿಕ ಅನುಕೂಲಕ್ಕಾಗಿ ಸದರ ತಾಲೂಕು ಕೇಂದ್ರಗಳಲ್ಲಿ ಮುಕ್ಕಾಂಗಳನ್ನು ನಡೆಸಿಕೊಂಡು ಬರಲಾಗುತ್ತಿದೆ.

**2) ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು**

ಕಛೇರಿಯ ಮುಖ್ಯಸ್ಥರಾಗಿದ್ದು ಕಛೇರಿಯ ಸಂಪೂರ್ಣ ಜವಾಬ್ದಾರಿ ನಿರ್ವಹಿಸುತ್ತಾರೆ. ಕಛೇರಿಯ ಯಾವುದೇ ಕೆಲಸಕ್ಕೆ ಸಂಬಂಧಿಸಿದಂತೆ ಅಂತಿಮ ತೀರ್ಮಾನ ತೆಗೆದುಕೊಳ್ಳುವ ಅಧಿಕಾರ ಹೊಂದಿರುತ್ತಾರೆ.ಸಿಬ್ಬಂದಿಯ ನಿಯಂತ್ರಣ ಕೆಲಸದ ಹಂಚಿಕೆಯನ್ನು ಮಾಡುವ ಅಧಿಕಾರವನ್ನು ಸಹ ಹೊಂದಿರುತ್ತಾರೆ. ಹಾಗೇಯೇ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಹೆಚ್ಚುವರಿ ಕಾರ್ಯದರ್ಶಿ ಹಾಗೂ ಜಿಲ್ಲಾ ಮಟ್ಟದ ರಸ್ತೆ ಸುರಕ್ಷತಾ ರಸ್ತೆ ಸುರಕ್ಷತಾ ಸಮಿತಿಯ ಸದಸ್ಯ ಕಾರ್ಯದರ್ಶಿ ಮತ್ತು ಕಛೇರಿಯ ಸಾರ್ವಜನಿಕ ಮಾಹಿತಿ ಅಧಿಕಾರಿಯಾಗಿಯೂ ಕಾರ್ಯ ನಿರ್ವಹಿಸುತ್ತಾರೆ.

**3) ಹಿರಿಯ ಮೋಟಾರು ವಾಹನ ನಿರೀಕ್ಷಕರು / ಮೋಟಾರು ವಾಹನ ನಿರೀಕ್ಷಕರು**

ಮೋಟಾರು ವಾಹನ ಕಾಯ್ದೆ ಹಾಗೂ ನಿಯಮಾನುಸಾರ ಸಾರಿಗೆ ವಾಹನಗಳ ನೋಂದಣಿ ಹಾಗೂ ಅರ್ಹತಾ ಪತ್ರ ನವೀಕರಣಕ್ಕೆ ಸಂಬಂಧಿಸಿದಂತೆ ವಾಹನವನ್ನು ಪರಿಶೀಲಿಸಿ ಪ್ರಮಾಣ ಪತ್ರ ನೀಡುವದು ಮತ್ತು ಅಭ್ಯರ್ಥಿಗಳನ್ನು ಪರೀಕ್ಷಿಸಿ ನಿರ್ವಾಹಕ, ಕಲಿಕಾ ಹಾಗೂ ಚಾಲನಾ ಅನುಜ್ಞಾ ಪತ್ರ ನೀಡುವುದು ವಾಹನಗಳ ತಪಾಸಣೆ,ಅಪಘಾತ ವಾಹನಗಳ ವೀಕ್ಷಣೆ ಬಾಕಿ ತೆರಿಗೆ ವಸೂಲಿ ಸೇರಿದಂತೆ ಇನ್ನಾವದೇ ಮೇಲಾಧಿಕಾರಿಗಳ ಆದೇಶದಂತೆ ಕಾರ್ಯ ನಿರ್ವಹಿಸುವುದು.

4) **ಕಛೇರು ಅಧೀಕ್ಷಕರು** :

ಕಛೇರಿಯ ಅಧೀಕ್ಷಕರು ಸಾರ್ವಜನಿಕರು ಕಛೇರಿಗೆ ಸಲ್ಲಿಸುವ ವಿವಿಧ ಕೆಲಸಗಳ ಅರ್ಜಿಗಳನ್ನು ಪರಿಶೀಲಿಸಿ ಸ್ವೀಕರಿಸುವದು,ದೈನಂದಿನ ರಾಜಸ್ವ ವಸೂಲಾತಿ ಅಂಕಿ ಅಂಶಗಳ ಸಂಗ್ರಹಣೆ ಸೇರಿದಂತೆ ಒಟ್ಟಾರೆಯಾಗಿ ಕಛೇರಿಯ ಸಿಬ್ಬಂದಿಗಳ ಕೆಲಸ ಕಾರ್ಯ ಮೇಲ್ವಿಚಾರಣೆ ಹಾಗೂ ಮೇಲಾಧಿಕಾರಿಗಳ ನೀಡಿದ ಆದೇಶ ಪಾಲಿಸುವುದು .

5) **ಪ್ರಥಮ /ದ್ವಿತೀಯ ದರ್ಜೆಸಹಾಯಕರು :**

ಕಛೇರಿಯ ಅಧೀಕ್ಷಕರು/ಮೇಲಾಧಿಕಾರಿಗಳು ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲಿಸಿ ಕಡತದೊಂದಿಗೆ ಮುಂದಿನ ಆದೇಶಕ್ಕಾಗಿ ಅಧೀಕ್ಷಕರಿಗೆ ಸಲ್ಲಿಸುವದು .ಕಡತಗಳಲ್ಲಿ ಮೇಲಾಧಿಕಾರಿಗಳು ನೀಡಿದ ಆದೇಶದ ಮೇರೆಗೆ ಸಾರ್ವಜನಿಕ ಕೆಲಸ ಕಾರ್ಯಗಳನ್ನು ನಿರ್ವಹಿಸುವದು ಕಛೇರಿಯಲ್ಲಿ ಪಾವತಿ ಮಾಡುವ ಶುಲ್ಕ ಮತ್ತು ತೆರಿಗೆ ಸ್ವೀಕರಿಸಿ ಅವುಗಳಿಗೆ ಸೂಕ್ತ ರಶೀದಿ ನೀಡುವದು.

6) **ಬೆರಳಚ್ಚುಗಾರರು** :

ಕಛೇರಿಯಿಂದ ಹೊರಡಿಸುವ ಎಲ್ಲಾ ಪತ್ರಗಳನ್ನು ಬೆರಳಚ್ಚು ಮಾಡುವದು ರಹದಾರಿ ಪರವಾನಿಗೆಗಳನ್ನು ಬೆರಳಚ್ಚಿಸುವುದು ಹಾಗೂ ಮೇಲಾಧಿಕಾರಿಗಳು ಹೇಳಿದ ಇತರೆ ಕೆಲಸಗಳನ್ನು ನಿರ್ವಹಿಸುವದು.

7) **ವಾಹನ ಚಾಲಕರು :**

ಕಛೇರಿಯ ಎಲ್ಲಾ ಕೆಲಸ ಕಾರ್ಯಗಳಿಗೆ ನಿಗದಿಪಡಿಸಿದ ವಾಹನವನ್ನು ಚಲಿಸುವದು.

8) **'ಡಿ' ಗ್ರೂಪ್ ನೌಕರರು (ಜವಾನರು)**

ಸ್ಥಳೀಯ ಟಪಾಲನ್ನು ವಿತರಿಸುವುದು ಹಾಗೂ ಮೇಲಾಧಕಾರಿಗಳ ಆದೇಶದ ಮೇರೆಗೆ ಕೆಲಸ ನಿರ್ವಹಿಸುವದು.

4(1)(ಬಿ)(iii)ಮೇಲ್ವಿಚಾರಣೆ ಮತ್ತು ಹೊಣೆಗಾರಿಕೆಯ ಮಾರ್ಗಗಳು ಸೇರಿದಂತೆ ತೀರ್ಮಾನ ತೆಗೆದು ಕೊಳ್ಳುವ ಪ್ರಕ್ರಿಯೆಯಲ್ಲಿ ಅನುಸರಿಸಬೇಕಾದ ಕಾರ್ಯವಿಧಾನಗಳು.

ಸಾರ್ವಜನಿಕರು ವಿವಿಧ ಕೆಲಸಗಳಿಗಾಗಿ ಕಛೇರಿಗೆ ಸಲ್ಲಿಸುವ ಅರ್ಜಿಗಳನ್ನು ನಿಯಮಾನುಸಾರ ಕಛೇರಿಯಲ್ಲಿನ ಅಧೀಕ್ಷಕರು ಪರಿಶೀಲಿಸಿ ಸ್ವೀಕರಿಸಿರುತ್ತಾರೆ.ತದನಂತರ ಕಛೇರಿಯ ಸ್ವೀಕೃತಿ ವಿಭಾಗ ಮುಖಾಂತರ ಆಯಾ ವಿಭಾಗಗಳನ್ನು ನಿರ್ವಹಿಸುವ ವಿಷಯ ನಿರ್ವಾಹಕರು ತಮಗೆ ಸಂಬಂಧಿಸಿದ ಅರ್ಜಿಗಳನ್ನು ಕಡತದಲ್ಲಿ ಟಿಪ್ಪಣಿಯೊಂದಿಗೆ ವಿಷಯವನ್ನು ಮಂಡಿಸುತ್ತಾರೆ .ನಂತರ ಅದನ್ನು ಸಂಬಂಧಿಸಿದಂತೆ ಅಧೀಕ್ಷಕರು ಪರಿಶೀಲಿಸಿ ತಮ್ಮ ಟಿಪ್ಪಣಿಯನ್ನು ಮಂಡಿಸಿದ ನಂತರ ಅಂತಿಮವಾಗಿ ಕಛೇರಿ ಮುಖ್ಯಸ್ಥರು ಸದರಿ ವಿಷಯದ ಬಗ್ಗೆ ಕಡತದಲ್ಲಿ ತಮ್ಮ ತಿರ್ಮಾನದ ಆದೇಶವನ್ನು ನೀಡುತ್ತಾರೆ. ಸದರಿಯವರು ನೀಡಿದ ಆದೇಶವನ್ನು ಅಂತಿಮವಾಗಿ ವಿಷಯ ನಿರ್ವಾಹಕರು ಮತ್ತು ಅಧೀಕ್ಷಕರುಗಳು ಪಾಲಿಸುತ್ತಾರೆ.

ಕೆಲವೊಂದು ವಿಷಯಗಳಿಗೆ ಕೆಲಸಗಳಿಗೆ ಕಛೇರಿಯ ತಾಂತ್ರಿಕ ಸಿಬ್ಬಂದಿಗಳಾದ ಹಿರಿಯ/ ಮೋಟಾರು ವಾಹನ ನಿರೀಕ್ಷಕರಗಳು ಪರಿಶೀಲನೆ ಅವಶ್ಯಕವಾಗಿದ್ದು ಅಂತಹ ಅರ್ಜಿಗಳನ್ನು ಕಛೇರಿಯ ಅಧೀಕ್ಷಕರು ಪರಿಶೀಲಿಸಿ ಸ್ವೀಕರಿಸಿದ ನಂತರ ತಾಂತ್ರಿಕ ಸಿಬ್ಬಂದಿಗಳು ಅರ್ಜಿಗಳನ್ನು ಕಳುಹಿಸುತ್ತಾರೆ. ಅಧೀಕ್ಷಕರು ಸಹ ವಾಹನವನ್ನು /ಅಭ್ಯರ್ಥಿಗಳನ್ನು ಭೌತಿಕವಾಗಿ ತಾಂತ್ರಿಕವಾಗಿ ಪರಿಶೀಲಿಸಿ ಕಛೇರಿಯ ಮುಖ್ಯಸ್ಥರಿಗೆ ಶಿಫಾರಸ್ಸು ಮಾಡುತ್ತಾರೆ. ಅಂತಿಮವಾಗಿ ಕಛೇರಿಯ ಮುಖ್ಯಸ್ಥರು ತೀರ್ಮಾನ ತೆಗೆದುಕೊಂಡು ಅಂತಹ ಕಡತಗಳನ್ನು ಆದೇಶ ಮಾಡುತ್ತಾರೆ. ಸದರಿಯವರ ಆದೇಶವನ್ನು ವಿಷಯ ನಿರ್ವಾಹಕರು ಹಾಗೂ ಅಧೀಕ್ಷಕರು ಅಂತಿಮವಾಗಿ ಪಾಲಿಸುತ್ತಾರೆ.

4(1)(ಬಿ)(iv)ಅದರ ಕಾರ್ಯಗಳ ನಿರ್ವಹಣೆಗೆ ಅದು ರೂಪಿಸಿರುವ ಸೂತ್ರಗಳು :

ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಗಳು ಮತ್ತು ಅವರ ಅಧೀನದಲ್ಲಿ ಬರುವ ಸಿಬ್ಬಂದಿಯವರು ಈ ಕೆಳಕಂಡ ಕಾಯ್ದೆ ಮತ್ತು ನಿಯಮದಡಿಯಲ್ಲಿ ಕರ್ತವ್ಯ ನಿರ್ವಹಿಸಲಾಗುತ್ತದೆ.

1. ಕೇಂದ್ರ ಮೋಟಾರು ವಾಹನ ಕಾಯ್ದೆ , 1989
2. ಕೇಂದ್ರ ಮೋಟಾರು ವಾಹನ ಕಾಯ್ದೆ ನಿಯಮಗಳು, 1989
3. ಕರ್ನಾಟಕ ಕೇಂದ್ರ ಮೋಟಾರು ವಾಹನ ಕಾಯ್ದೆ ನಿಯಮಗಳು, 1989
4. ಕರ್ನಾಟಕ ಕೇಂದ್ರ ಮೋಟಾರು ವಾಹನ ಕಾಯ್ದೆ ಮತ್ತು ನಿಯಮಗಳು, 1957 ಮತ್ತು ಸಂಬಂಧಿಸಿದ ತಿದ್ದುಪಡಿಗಳು.
5. (ಬಿ)5. ಅದರ ಕಾರ್ಯಗಳಿಗೆ ನೆರೆವೇರಿಸುವುದಕ್ಕಾಗಿ ಅದು ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ ಅಥವಾ ಅದರ ಉದ್ಯೋಗಿಗಳು ಬಳಸುವ ನಿಯಮಗಳು. ಅನುಸೂಚಿಗಳು. ಕೈಪಿಡಿಗಳು ಮತ್ತು ದಾಖಲೆಗಳು :
    1. ಕೇಂದ್ರ ಮೋಟಾರು ವಾಹನ ಕಾಯ್ದೆ , 1989
    2. ಕೇಂದ್ರ ಮೋಟಾರು ವಾಹನ ಕಾಯ್ದೆ ನಿಯಮಗಳು, 1989
    3. ಕರ್ನಾಟಕ ಕೇಂದ್ರ ಮೋಟಾರು ವಾಹನ ಕಾಯ್ದೆ ನಿಯಮಗಳು, 1989
    4. ಕರ್ನಾಟಕ ಕೇಂದ್ರ ಮೋಟಾರು ವಾಹನ ಕಾಯ್ದೆ ಮತ್ತು ನಿಯಮಗಳು, 1957 ಮತ್ತು ಸಂಬಂಧಿಸಿದ ತಿದ್ದುಪಡಿಗಳು.

4(1)(ಬಿ)(v)ಅದರ ಕಾರ್ಯಗಳಿಗೆ ನೆರವೇರಿಸುವುದಕ್ಕಾಗಿ ಅದು ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ ಅಥವಾ ಅದರ ಉದ್ಯೋಗಿಗಳು ಬಳಸುವ ನಿಯಮಗಳು , ವಿನಿಯಮಗಳು, ಅನುಸೂಚಿಗಳು, ಕೈಪಿಡಿಗಳು ಮತ್ತು ದಾಖಲೆ :

1. ಕೇಂದ್ರ ಮೋಟಾರು ವಾಹನಗಳ ಅಧಿನಿಯಮ, 1989
2. ಕೇಂದ್ರ ಮೋಟಾರು ವಾಹನಗಳ ನಿಯಮಗಳು, 1989
3. ಕರ್ನಾಟಕ ಮೋಟಾರು ವಾಹನ ತೆರಿಗೆ ಕಾಯ್ದೆ 1957
4. ಕರ್ನಾಟಕ ಮೋಟಾರು ವಾಹನ ನಿಯಮಗಳು 1989
5. ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ಕೈಪಿಡಿ,ಅನುಬಂಧ,ಅನುಸೂಚಿ ಮತ್ತು ಉಪಬಂಧಗಳು

4(1)(ಬಿ)(vi)ಅದು ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ ದಸ್ತಾವೇಜುಗಳ ಪ್ರವರ್ಗಗಳ ವಿವರ ಪಟ್ಟಿ :

1) ವಾಹನಗಳ ಹೊಸ ನೋಂದಣಿಯ ಕಡತ ಹಾಗೂ ಬಿ ವಹಿಗಳು.
2) ಅನುಪಯುಕ್ತದಲ್ಲಿರುವ ವಾಹನಗಳ ಅರ್ಜಿ ಹಾಗೂ ಕಡತಗಳು.
3) ಚಾಲನಾ ಹಾಗೂ ನಿರ್ವಾಹಕ ಅನುಜ್ಞಾ ಪತ್ರಗಳ ಇತಿಹಾಸದ ವಹಿಗಳು
4) ಸರಕು ಸಾಗಣೆ ಹಾಗೂ ಪ್ರಯಾಣಿಕ ವಾಹನಗಳಿಗೆ ರಹದಾರಿಗಳನ್ನು ನೀಡಿರುವ ವಿವರಗಳ ಪುಸ್ತಕಗಳು
5) ಮೋಟಾರು ವಾಹನಗಳ ತೆರಿಗೆ,ಹಸಿರು ತೆರಿಗೆ,ಹಾಗೂ ಶುಲ್ಕ ಸಂಗ್ರಹಣೆ ವಹಿಗಳು.
6) ಪ್ರವರ್ತನ ವಿವರಗಳ ವಹಿ
7) ಸಿಬ್ಬಂದಿಗಳ ಸೇವಾ ಪುಸ್ತಕಗಳು ಹಾಗೂ ವೈಯಕ್ತಿಕ ಕಡತಗಳು
8) ವೇತನ ಬಡವಣೆಯ ವಹಿಗಳು
9) ಸಿಬ್ಬಂದಿಗಳ ವಾರ್ಷಿಕ ಆಸ್ತಿ ಮತ್ತು ಧಾಯತ್ವ ವಿವರಗಳು
10) ಸರಕಾರಿ ವಾಹನಗಳ ಲಾಗ್ ಪುಸ್ತಕಗಳು
11)ಹೊಸ ನೋಂದಣಿ ಪುಸ್ತಕಗಳ, ಸ್ಮಾರ್ಟ್ ಕಾರ್ಡ್‌ಗಳ, ತೆರಿಗೆ ಚೀಟಿಗಳು ಹಾಗೂ ಎ ಮತ್ತು ಬಿ ಚಲನ ಪುಸ್ತಕಗಳ ದಾಸ್ತಾನು ವಹಿ.

**ಈ ಕಛೇರಿಯ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಮುಖ್ಯಸ್ಥರಾಗಿ ಆಡಳಿತ ಸಂಪೂರ್ಣ ಜವಾಬ್ದಾರಿ ಹೊಂದಿರುತ್ತಾರೆ.**

4(1)(ಬಿ)(vii)ಅದರ ಕಾರ್ಯನೀತಿಯ ರಚನೆ ಅಥವಾ ಅದರ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಾರ್ವನಜಿಕರೊಡನೆ ಸಮಾಲೋಚಿಸಲು ಅಥವಾ ಅದರ ಪ್ರಾತಿನಿಧ್ಯವಿರುವಂತೆ ಮಾಡಲು ಇರುವಂತಹ ಯಾವುದೇ ವ್ಯವಸ್ಥೆಯ ವಿವರಗಳು :

ಈ ಪ್ರಾಧಿಕಾರ ಮೇಲಾಧಿಕಾರಿಗಳ ಸೂಚನೆಯ ಮೇರೆಗೆ ಸಾರ್ವಜನಿಕ ಸಭೆ ಮತ್ತು ಸಮಾಲೋಚನೆ ಏರ್ಪಡಿಸುವಂತಹ ಸಂದರ್ಭ ಒದಗಿಬಂದಲ್ಲಿ ಸಾರ್ವಜನಿಕ ಪ್ರಾತಿನಿಧ್ಯಕ್ಕೆ ಮುಕ್ತ ವ್ಯವಸ್ಥೆ ಇರುತ್ತದೆ.

4(1)(ಬಿ) (viii)ಮಂಡಳಿಗಳು ,ಪರಿಷತ್ತುಗಳು,ಸಮಿತಿಗಳು ಅಥವಾ ನಿಯಮಗಳು ಅದರ ಭಾಗವಾಗಿ ಅಥವಾ ಅದರ ಸಲಹೆಗಳು ಉದ್ದೇಶಕ್ಕಾಗಿ ರಚಿತವಾದ ಇಬ್ಬರು ಅಥವಾ ಹೆಚ್ಚು ವ್ಯಕ್ತಿಗಳನ್ನೊಳಗೊಂಡ ಮಂಡಳಿಗಳ.ಪರಿಷತ್ತುಗಳ ಸಮಿತಿಗಳ ಮತ್ತು ಇತರ ನಿಯತಕಾಲಿಕ ಸಭೆಗಳು ಸಾರ್ವಜನಿಕರಿಗೆ ಮುಕ್ತವಾಗಿರುತ್ತವೆಯೋ ಅಥವಾ ಅಂತಹ ಸಭೆಗಳ ನಡಾವಳಿಗಳು ಸಾರ್ವಜನಿಕರಿಗೆ ದೊರೆಯುತ್ತವೆಯೋ ಎಂಬುದರ ವಿವರ ಪಟ್ಟಿಕೆ :

ಸಹಾಯಕ ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಹೊನ್ನಾವರ , ಮೋಟಾರು ವಾಹನ ಕಾಯ್ದೆ 189 ಸೆಕ್ಷನ್ 68(1)ರ ಅಡಿಯಲ್ಲಿ ವಾಹನಗಳ ರಹದಾರಿ ನೀಡುವ ಅಧಿಕಾರಿ ಹೊಂದಿರುತ್ತಾರೆ.

1) ಅಧ್ಯಕ್ಷರು : ಜಿಲ್ಲಾಧಿಕಾರಿಗಳು
2) ಸದಸ್ಯರು : ಜಿಲ್ಲಾ ಪೊಲೀಸ್ ಅಧಿಕಾರಿಗಳು.
3) ಹೆಚ್ಚುವರಿ ಕಾರ್ಯದರ್ಶಿ : ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ.

4(1)(ಬಿ)(ix) ರ ಅಧಿಕಾರಿಗಳ ನೌಕರರ ನಿರ್ದೇಶಿಕೆ

| ಕ್ರಮ ಸಂಖ್ಯೆ | ಪದನಾಮ ಶ್ರೀಯುತರು | ಹುದ್ದೆ | ವಿಳಾಸ |
|---|---|---|---|
| 1 | ಆರ್.ಎಮ್.ವೇರ್ಣಕರ್ | ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ,ನಿಯೋಜನೆ ಮೇಲೆ | ಮಂಗಳೂರು |
| 2 | ಎನ್.ಜಿ.ಹಿತ್ತಲಮಕ್ಕಿ | ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ,ಹೊನ್ನಾವರ (ಹೆಚ್ಚುವರಿ) | ಬೆಳಗಾವಿ |
| 3 | ಎಲ್.ಪಿ.ನಾಯಕ | ಹಿರಿಯ ಮೋಟಾರು ವಾಹನ ನಿರೀಕ್ಷಕರು | ಹೊನ್ನಾವರ |
| 4 | ಶ್ರೀಮತಿ ರಂಜನಾ ರಾಯ್ಕರ್ | ಅಧೀಕ್ಷಕರು | ಹೊನ್ನಾವರ |
| 5 | ಖಾಲಿ ಹುದ್ದೆ | ಮೋಟಾರು ವಾಹನ ನಿರೀಕ್ಷಕರು | |
| 6 | ಜಿ.ವಿ.ಬಿಂದಗಿ | ಪ್ರ.ದ.ಸಹಾಯಕರು | ಹೊನ್ನಾವರ |
| 7 | ಆರ್.ವಿ.ಭಟ್ | ಪ್ರ.ದ.ಸಹಾಯಕರು | ಹೊನ್ನಾವರ |
| 8 | ಎಸ್.ಎಮ್.ಪಟಗಾರ | ದ್ವಿ.ದ.ಸಹಾಯಕರು | ಹೊನ್ನಾವರ |
| 9 | ಎಸ್.ಬಿ.ಪಾಲೇಕರ್ | ದ್ವಿ.ದ.ಸಹಾಯಕರು | ಹೊನ್ನಾವರ |
| 10 | ಯೋಗೇಂದ್ರಸಿಂಗ್ ಕುಮುದನ | ದ್ವಿ.ದ.ಸ ನಿಯೋಜನೆ ಮೇರೆಗೆ | ಧಾರವಾಡ |
| 11 | ಸಂತೋಷ.ಎನ್.ಕರಲಿಂಗಣ್ಣವರ | ದ್ವಿ.ದ.ಸ ನಿಯೋಜನೆ ಮೇರೆಗೆ | ಗದಗ |
| 12 | ಖಾಲಿ ಹುದ್ದೆ | ಬೆರಳಚ್ಚುಗಾರರು | |
| 13 | ಜಿ.ನಾಗರಾಜ | ವಾಹನ ಚಾಲಕರು | ಹೊನ್ನಾವರ |
| 14 | ಖಾಲಿ ಹುದ್ದೆ | ಗ್ರೂಪ್ 'ಡಿ' | |
| 15 | ಖಾಲಿ ಹುದ್ದೆ | ಗ್ರೂಪ್ 'ಡಿ' | |

4(1)(ಬಿ)(x)ಆದರೆ ವಿನಿಮಯಗಳಲ್ಲಿ ಉಪಬಂಧಿಸಿರುವಂತೆ ಪರಿಹಾರದ ವ್ಯವಸ್ಥೆಯೂ ಸೇರಿದಂತೆ ಅದರ ಪ್ರತಿಯೊಬ್ಬ ಅಧಿಕಾರಿ ಮತ್ತು ನೌಕರರು ಪಡೆಯುವ ತಿಂಗಳು ಗೌರವಧನ :

| ಕ್ರಮ ಸಂಖ್ಯೆ | ಪದನಾಮ ಶ್ರೀಯುತರು | ಹುದ್ದೆ | ಮೂಲ ವೇತನ |
|---|---|---|---|
| 1 | ಆರ್.ಎಮ್.ವೇರ್ಣಕರ್ | ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ,ನಿಯೋಜನೆ ಮೇಲೆ | 32,800 |
| 2 | ಎನ್.ಜಿ.ಹಿತ್ತಲಮಕ್ಕಿ | ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ,ಹೊನ್ನಾವರ (ಹೆಚ್ಚುವರಿ) | ಹೆಚ್ಚಿನ ಪ್ರಭಾರ |
| 3 | ಎಲ್.ಪಿ.ನಾಯಕ | ಹಿರಿಯ ಮೋಟಾರು ವಾಹನ ನಿರೀಕ್ಷಕರು | 32,800 |
| 4 | ಶ್ರೀಮತಿ ರಂಜನಾ ರಾಯ್ಕರ್ | ಅಧೀಕ್ಷಕರು | 30,400 |
| 5 | ಖಾಲಿ ಹುದ್ದೆ | ಮೋಟಾರು ವಾಹನ ನಿರೀಕ್ಷಕರು | - |
| 6 | ಜಿ.ವಿ.ಬಿಂದಗಿ | ಪ್ರ.ದ.ಸಹಾಯಕರು | 26,700 |
| 7 | ಆರ್.ವಿ.ಭಟ್ | ಪ್ರ.ದ.ಸಹಾಯಕರು | 26,000 |
| 8 | ಎಸ್.ಎಮ್.ಪಟಗಾರ | ದ್ವಿ.ದ.ಸಹಾಯಕರು | 11,800 |
| 9 | ಎಸ್.ಬಿ.ಪಾಲೇಕರ್ | ದ್ವಿ.ದ.ಸಹಾಯಕರು | 13,300 |
| 10 | ಯೋಗೇಂದ್ರಸಿಂಗ್ ಕುಮುದನ | ದ್ವಿ.ದ.ಸ ನಿಯೋಜನೆ ಮೇರೆಗೆ | 18,550 |
| 11 | ಸಂತೋಷ.ಎನ್.ಕರಲಿಂಗಣ್ಣವರ | ದ್ವಿ.ದ.ಸ ನಿಯೋಜನೆ ಮೇರೆಗೆ | 11,800 |
| 12 | ಖಾಲಿ ಹುದ್ದೆ | ಬೆರಳಚ್ಚುಗಾರರು | – |
| 13 | ಜಿ.ನಾಗರಾಜ | ವಾಹನ ಚಾಲಕರು | 16,000 |
| 14 | ಖಾಲಿ ಹುದ್ದೆ | ಗ್ರೂಪ್ 'ಡಿ' | - |
| 15 | ಖಾಲಿ ಹುದ್ದೆ | ಗ್ರೂಪ್ 'ಡಿ' | - |

4(1)(ಬಿ)(xi) ಎಲ್ಲಾ ಯೋಜನೆಗಳ ವಿವರಗಳನ್ನು ಸೂಚಿಸುವ ಪ್ರಸ್ತಾವಿತ ವೆಚ್ಚಗಳನ್ನು ಮತ್ತು ಮಾಡಲಾದ ಬಟವಾಡೆಗಳ ವರದಿಯನ್ನು ಸೂಚಿಸಿ : ಅದರ ಪ್ರತಿಯೊಂದು ಏಜೆನ್ಸಿಗೆ ಹಂಚಿಕೆ ಮಾಡಲಾದ ಆಯವ್ಯಯ.

<u>ಅನುದಾನ ಬಿಡುಗಡೆ 2017-18</u>

| ಲೆಕ್ಕ ಶಿರ್ಷಿಕೆ | ಅನುದಾನ ಬಿಡುಗಡೆ | ಖರ್ಚಿನ ಬಾಬ್ತು | ಉಳಿದ ಹಣ |
|---|---|---|---|
| ಪ್ರವಾಸ ಭತ್ಯೆ -041 | | | |
| ಕಛೇರಿ ವೆಚ್ಚಗಳು -051 | 500000 | 560000 | 40000 |
| ಕಟ್ಟಡ ಬಾಡಿಗೆ ಮತ್ತು ವಿದ್ಯುತ್ ವೆಚ್ಚ - 071 | 550000 | 462500 | 87500 |
| ಇಂಧನ | 100000 | 75996 | 24000 |

4(1)(ಬಿ)(xii) ಹಂಚಿಕೆ ಮಾಡಲಾದ ಮೊಬಲನ್ನೊಳಗೊಂಡು, ಸಹಾಯಧನ ಕಾರ್ಯಕ್ರಮಗಳ ಜಾರಿಯ ವಿಧಾನವನ್ನು ಮತ್ತು ಅಂತಹ ಕಾರ್ಯಕ್ರಮಗಳನ್ನು ಫಲಾನುಭವಿಗಳ ವಿವರಗಳು.

**ಯಾವುದು ಇರುವುದಿಲ್ಲ.**

4(1)(ಬಿ)(xii)ಅದು ನೀಡಿರುವ ರಿಯಾಯತಿಗಳನ್ನು ಅನುಮತಿ ಪತ್ರಗಳನ್ನು ಅಥವಾ ಅಧಿಕಾರ ಪತ್ರಗಳನ್ನು ಪಡೆಯುವವರ ವಿವರಗಳು

ಕರ್ನಾಟಕ ಮೋಟಾರು ವಾಹನ ನಿಯಮ 1989 ರ ಪ್ರಕಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಅಭ್ಯರ್ಥಿಗಳಿಗೆ ರಹದಾರಿ ಶುಲ್ಕದಲ್ಲಿ ಅರ್ಧದಷ್ಟು ರಿಯಾಯತಿ ನೀಡಲು ಅವಕಾಶವಿದೆ.

4(1)(ಬಿ)(xiv) ಅದರ ಬಳಿ ಲಭ್ಯವಿರುವ ಅಥವಾ ಅದು ಹೊಂದಿರುವ ವಿದ್ಯುನ್ಮಾನ ರೂಪಕ್ಕೆ ಪರಿವರ್ತಿಸಿರುವ ಮಾಹಿತಿ ಸಂಬಂಧಿಸಿದ ವಿವರಗಳು :

ಭಾಗಶಃ ಗಣಕೀಕರಣವಾಗಿದ್ದು ಗಣಕೀಕರಣಗೊಂಡ ಕಡತಗಳ ಲಭ್ಯ ಮಾಹಿತಿ ಪಡೆಯಬಹುದು.

4(1)(ಬಿ)(xv)ಸಾರ್ವಜನಿಕ ಉಪಯೋಗಕ್ಕಾಗಿ ಗ್ರಂಥಾಲಯವನ್ನು ಅಥವಾ ವಾಚನಾಲಯವನ್ನು ನಿರ್ವಹಿಸುತ್ತಿದ್ದಲ್ಲಿ ಅದರ ಕೆಲಸದ ಸಮಯವನ್ನೊಳಗೊಂಡಂತೆ ಮಾಹಿತಿ ಪಡೆಯಲು ಸಾರ್ವಜನಿಕ ಲಭ್ಯವಿರುವ ಸೌಲಭ್ಯಗಳ ವಿವರಗಳು :

**ಸಾರ್ವಜನಿಕ ಉಪಯೋಗಕ್ಕಾಗಿ ಗ್ರಂಥಾಲಯವನ್ನು ಅಥವಾ ವಾಚನಾಲಯ ಈ ಕಛೇರಿಯ ಅಸ್ತಿತ್ವದಲ್ಲಿ ಇರುವುದಿಲ್ಲ.**

4(1)(ಬಿ) (xvi)ಸಾರ್ವಜನಿಕ ಮಾಹಿತಿ ಅಧಿಕಾರಗಳ ಹೆಸರುಗಳು , ಪದನಾಮ ಮತ್ತು ಇತರೆ ವಿವರಗಳು:

1) ಸಾರ್ವಜನಿಕ ಮಾಹಿತಿ ಅಧಿಕಾರಿ - ಎನ್.ಜಿ.ಹಿತ್ತಲಮಕ್ಕಿ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ , ಹೊನ್ನಾವರ - ದೂರವಾಣಿ -08387 -220033
2) ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ - ಶ್ರೀಮತಿ ರಂಜನಾ ರಾಯ್ಕರ್ ಅಧೀಕ್ಷಕರು
3) ಮೇಲನ್ಮವಿ ಪ್ರಾಧಿಕಾರ - ಬಿ.ಪಿ.ಉಮಾಶಂಕರ ಜಂಟಿ ಸಾರಿಗೆ ಆಯುಕ್ತರು, ಬೆಳಗಾವಿ ವಿಭಾಗ,ಬೆಳಗಾವಿ ಪ್ರಾದೇಶಿಕ ಸಾರಿಗೆ ಕಛೇರಿಯ ಮೊದಲನೇಯ ಮಹಡಿ, ಆರ್.ಟಿ.ಓ ವೃತ್ತ ಬೆಳಗಾವಿ - 580016 0831 - 2423900

4(1)(ಬಿ)(xvii) ನಿಯಮಿಸಬಹುದಾದಂತಹ ಇತರೆ ಮಾಹಿತಿಯನ್ನು ಪ್ರಕಟಿಸತಕ್ಕದ್ದು :

ಅ) ಕಛೇರಿಗೆ ಒಟ್ಟು 2017-18 ವರ್ಷದ ಸಾಲಿನಲ್ಲಿ ಒಟ್ಟು ರೂ.2580 ಲಕ್ಷ ರಾಜಸ್ವ ವಸೂಲಾತಿಗೆ ನಿಗಧಿ ಪಡಿಸಲಾಗಿದ್ದು ಅದರಲ್ಲಿ ಒಟ್ಟು ಆ ಸಾಲಿನಲ್ಲಿ 31-03-2017 ರವರೆಗೆ ರೂ.1984 ಲಕ್ಷ ವಸೂಲಿ ಮಾಡಲಾಗಿದೆ. ಅದರಂತೆ 102.5% ಗುರಿ ಮುಟ್ಟಲಾಗಿದೆ.

ಆ) ಕೇಂದ್ರ ಕಛೇರಿಯಾದ ಮಾನ್ಯ ಸಾರಿಗೆ ಆಯುಕ್ತರ ಕಛೇರಿ, ಬೆಂಗಳೂರಿನಿಂದ ಬಿಡುಗಡೆಯಾದ ವೆಬ್ ಸೈಟ್ www.rto.kar.nic.co ರಲ್ಲಿ ಸಾರ್ವಜನಿಕರು ತಮ್ಮ ಕಾರ್ಯ ಕೆಲಸಗಳಿಗೆ ಅನುಸರಿಸಬೇಕಾದ ಸೂಕ್ತ ಮಾರ್ಗದರ್ಶನ ಪ್ರಕಟಿಸಲಾಗಿದೆ.